# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1308

ಸದಸ್ಯರ ಹೆಸರು : ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 18-03-2020

ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕು ಸೋಂಪುರ ಹೋಬಳಿಯ ಯಾವ ಯಾವ ಗ್ರಾಮವಾಸಿಗಳು ಸ್ಮಶಾನ ಭೂಮಿ ಮಂಜೂರಾತಿಗೆ ಅರ್ಜಿ ಸಲ್ಲಿಸಿರುತ್ತಾರೆ; (ವಿವರ ನೀಡುವುದು) | ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕು ಸೋಂಪುರ ಹೋಬಳಿಯ ಹೊನ್ನೇನಹಳ್ಳಿ ಗ್ರಾಮದಲ್ಲಿ ಸಾರ್ವಜನಿಕ ಸ್ಮಶಾನ ಮಂಜೂರಾತಿ ಕೋರಿ ಶ್ರೀ ಎಂ.ರವಿಕುಮಾರ್ ಇವರು ಮನವಿ ಸಲ್ಲಿಸಿದ್ದು, ಸದರಿ ಮನವಿಯನ್ನು ಪರಿಶೀಲಿಸಿ ಹೊನ್ನೇನಹಳ್ಳಿ ಗ್ರಾಮದ ಸ.ನಂ.101ರಲ್ಲಿ 0-12 ಗುಂಟೆ ಸರ್ಕಾರಿ ಜಮೀನನ್ನು ಸಾರ್ವಜನಿಕ ಸ್ಮಶಾನಕ್ಕಾಗಿ ಮಂಜೂರು ಮಾಡಲಾಗಿರುತ್ತದೆ. |
| ಆ) | ಸೋಂಪುರ ಹೋಬಳಿಯ ಬಾಪೂಜಿನಗರ ಮತ್ತು ಕಾಸರಘಟ್ಟ ಗ್ರಾಮಗಳಲ್ಲಿ ಕನಿಷ್ಟ ಸ್ಮಶಾನದ ಸೌಕರ್ಯವನ್ನು ಸರ್ಕಾರದ ವತಿಯಿಂದ ಒದಗಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಸ್ಮಶಾನ ಭೂಮಿ ಮಂಜೂರು ಮಾಡಲಾಗಿದೆಯೇ; | ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕು ಸೋಂಪುರ ಹೋಬಳಿಯ ಕಾಸರಘಟ್ಟ ಗ್ರಾಮದ ಸ.ನಂ.49ರಲ್ಲಿ 1-00 ಎಕರೆ ಜಮೀನನ್ನು ಕಾಸರಘಟ್ಟ ಮತ್ತು ಬಾಪೂಜಿನಗರಗಳಿಗೆ ಸಾರ್ವಜನಿಕ ಸ್ಮಶಾನಕ್ಕಾಗಿ ಕಾಯ್ದಿರಿಸಲಾಗಿರುತ್ತದೆ. ಕಾಸರಘಟ್ಟ ಗ್ರಾಮವು ಕಂದಾಯ ಗ್ರಾಮವಾಗಿದ್ದು, ಕಾಸರಘಟ್ಟ ಗ್ರಾಮದ ದಾಖಲೆ ಗ್ರಾಮ ಬಾಪೂಜಿನಗರ ಆಗಿರುತ್ತದೆ. |
| ಇ) | ಸದರಿ ಗ್ರಾಮ ವಾಸಿಗಳು ಸ್ಮಶಾನ ಭೂಮಿ ಮಂಜೂರಾತಿಗೆ ಅರ್ಜಿ ಸಲ್ಲಿಸಿರುತ್ತಾರೆಯೇ; ಇದ್ದಲ್ಲಿ, ವಿವರ ನೀಡುವುದು; ಮತ್ತು ಯಾವ ನಿರ್ದಿಷ್ಟ ದಿನಾಂಕದೊಳಗೆ ಅರ್ಜಿ ವಿಲೇವಾರಿ ಮಾಡುವುದರ ಮೂಲಕ ಸ್ಮಶಾನ ಭೂಮಿ ಮಂಜೂರು ಮಾಡಲಾಗುವುದು? | ಉದ್ಭವಿಸುವುದಿಲ್ಲ. |

**ಸಂಖ್ಯೆ: ಆರ್‌ಡಿ 65 ಎಲ್‌ಜಿಕ್ಯೂ 2020 (ಇ)**

(ಆರ್.ಅಶೋಕ)
ಕಂದಾಯ ಸಚಿವರು